Akashvani : Bengaluru
National Bulletin In Kannada
27.10.2025 : 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*******

ಮುಖ್ಯಾಂಶಗಳು

೧. ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆ ಪ್ರದರ್ಶಿಸಲು ಪೂರ್ವ-ಏಷ್ಯಾ ಶಂಗಸಭೆಯಲ್ಲಿ ವಿದೇಶಾಂಗ ಸಚಿವ ಡಾ.ಜೈಶಂಕರ್ ಕರೆ

೨. ೧೨ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ಎರಡನೇ ಹಂತದ ಮತದಾರರ ಪಟ್ಟಿ ಪರಿಷ್ಕರಣೆ - ಚುನಾವಣಾ ಆಯೋಗ

೩. ಖಾಲಿ ಹುದ್ದೆಗಳ ತ್ವರಿತ ಭರ್ತಿಗೆ ಕ್ರಮವಹಿಸಲು ಐಸಿಎಆರ್‌ಗೆ ಕೇಂದ್ರ ಕೃಷಿ ಸಚಿವರ ಸೂಚನೆ

೪. ಆಂಧ್ರಪದೇಶ ಕರಾವಳಿಗೆ ನಾಳೆ ಅಪ್ಪಳಿಸಲಿರುವ ಮೊಂಥಾ ಚಂಡಮಾರುತ; ಕರಾವಳಿ ರಾಜ್ಯಗಳಲ್ಲಿ ಭಾರಿ ಮಳೆಯ ಮುನ್ಸೂಚನೆ, ಹೈಅಲರ್ಟ್ ಘೋಷಣೆ

************

ಜಾಗತಿಕ ಶಾಂತಿ ಮತ್ತು ಸ್ಥಿರತೆಗೆ ದೊಡ್ಡ ಬೆದರಿಕೆಗಳಲ್ಲಿ ಒಂದಾಗಿರುವ ಭಯೋತ್ಪಾದನೆಯ ವಿರುದ್ಧ ಜಗತ್ತು ಶೂನ್ಯ ಸಹಿಷ್ಣುತೆಯನ್ನು ಪ್ರದರ್ಶಿಸಬೇಕು ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಬಲವಾಗಿ ಪ್ರತಿಪಾದಿಸಿದ್ದಾರೆ. ಮಲೇಷ್ಯಾದ ಕೌಲಾಲಂಪುರದಲ್ಲಿ ಇಂದು ನಡೆದ ೨೦ನೇ ಪೂರ್ವ-ಏಷ್ಯಾ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಭಯೋತ್ಪಾದನೆಯ ಕುರಿತ ಯಾವುದೇ ವಿಷಯದಲ್ಲಿ ರಾಜಿ ಮಾಡಿಕೊಳ್ಳಲು ಸಾಧ್ಯವಿಲ್ಲ. ಜಾಗತಿಕ ಸಮುದಾಯವು ಅದರ ವಿರುದ್ಧ ಸಾಮೂಹಿಕವಾಗಿ ಕಾರ್ಯನಿರ್ವಹಿಸುವಂತೆ ಒತ್ತಾಯಿಸಿದರು. ಕಡಲ ಸಹಕಾರವನ್ನು ಮತ್ತಷ್ಟು ಹೆಚ್ಚಿಸುವ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದ ಸಚಿವರು, ೨೦೨೬ ನೇ ವರ್ಷವನ್ನು ಆಸಿಯಾನ್-ಭಾರತ ಕಡಲ ಸಹಕಾರ ವರ್ಷವೆಂದು ಆಚರಿಸಲಾಗುವುದು ಎಂದು ಘೋಷಿಸಿದರು. ಉಕ್ರೇನ್ ಮತ್ತು ಗಾಜಾದಲ್ಲಿ ನಡೆಯುತ್ತಿರುವ ಸಂಘರ್ಷಗಳನ್ನು ಉಲ್ಲೇಖಿಸಿದ ಅವರು ಗಾಜಾ ಶಾಂತಿ ಯೋಜನೆಯನ್ನು ಸ್ವಾಗತಿಸಿ, ಉಕ್ರೇನ್‌ನಲ್ಲಿ ಯುದ್ಧವನ್ನು ಶೀಘ್ರವಾಗಿ ಕೊನೆಗೊಳಿಸುವ ಭಾರತದ ಕರೆಯನ್ನು ಪುನರುಚ್ಚರಿಸಿದರು. ಪ್ರಾದೇಶಿಕ ಸಂಪರ್ಕದ ಕುರಿತು ಮಾತನಾಡುತ್ತಾ, ಮ್ಯಾನ್ಮಾರ್ ಭೂಕಂಪದ ಸಂದರ್ಭದಲ್ಲಿ ಭಾರತವು ತ್ವರಿತ ಪ್ರತಿಕ್ರಿಯೆಯ ಬಗ್ಗೆ ತಿಳಿಸಿದ ಅವರು, ಇಂಡೋ-ಪೆಸಿಫಿಕ್ ಪ್ರದೇಶದಾದ್ಯಂತ ಶಾಂತಿ, ಪ್ರಗತಿ ಮತ್ತು ಸಮೃದ್ಧಿಯನ್ನು ಉತ್ತೇಜಿಸಲು ಪೂರ್ವ-ಏಷ್ಯಾ ಶೃಂಗಸಭೆಯನ್ನು ಭಾರತ ಒಂದು ಪ್ರಮುಖ ವೇದಿಕೆಯಾಗಿ ಗೌರವಿಸುತ್ತದೆ ಎಂದರು.

************

ಕೌಲಾಲಂಪುರದಲ್ಲಿ ನಡೆಯುತ್ತಿರುವ ಆಸಿಯಾನ್ ೨೦೨೫ ಶೃಂಗಸಭೆಯ ನೇಪಥ್ಯದಲ್ಲಿ ಕೇಂದ್ರ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಸೇರಿದಂತೆ ವಿವಿಧ ರಾಷ್ಟ್ರಗಳ ವಿದೇಶಾಂಗ ಸಚಿವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಸಾಮಾಜಿಕ

ಮಾಧ್ಯಮದಲ್ಲಿ ಸಚಿವ ಡಾ.ಜೈಶಂಕರ್, ದ್ವಿಪಕ್ಷೀಯ ಸಹಕಾರವನ್ನು ಮುನ್ನಡೆಸಲು ಮತ್ತು ಮುಕ್ತ ಇಂಡೋ-ಪೆಸಿಫಿಕ್ ಪ್ರದೇಶವನ್ನು ಉತ್ತೇಜಿಸಲು ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರ ಬದ್ಧತೆಯನ್ನು ಸ್ವಾಗತಿಸಿದರು. ವಿದೇಶಾಂಗ ಸಚಿವರು, ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಭೇಟಿಯಾಗಿ ದ್ವಿಪಕ್ಷೀಯ ಸಂಬಂಧಗಳು ಮತ್ತು ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳ ಕುರಿತು ಚರ್ಚೆ ನಡೆಸಿದರು. ಮಲೇಷ್ಯಾ ವಿದೇಶಾಂಗ ಸಚಿವ ಮೊಹಮ್ಮದ್ ಹಾಜಿ ಹಸನ್ ಅವರೊಂದಿಗೆ ಭಾರತ-ಮಲೇಷ್ಯಾ ನಡುವಿನ ದ್ವಿಪಕ್ಷೀಯ ಸಹಕಾರದಲ್ಲಿನ ಪ್ರಗತಿಯ ಕುರಿತು ಚರ್ಚೆ ನಡೆಸಿದ ಸಚಿವ ಡಾ. ಜೈಶಂಕರ್, ಮ್ಯಾನ್ಮಾರ್‌ನಲ್ಲಿನ ಪರಿಸ್ಥಿತಿಯ ಬಗ್ಗೆಯೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಬಳಿಕ ಜಪಾನ್ ವಿದೇಶಾಂಗ ಸಚಿವ ಮೊತೆಗಿ ತೊಶಿಮಿತ್ಸು ಅವರೊಂದಿಗೂ ಸಭೆ ನಡೆಸಿದ ಡಾ.ಜೈಶಂಕರ್, ಮುಂದಿನ ದಶಕದ ಸಹಕಾರದ ಜಂಟಿ ದೃಷ್ಟಿಕೋನದ ಸಾಕಾರಕ್ಕಾಗಿ ಕಾರ್ಯನಿರ್ವಹಿಸಲು ಒಮ್ಮತ ಸೂಚಿಸಿದರು.

************

ಎರಡನೇ ಹಂತದ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆಯನ್ನು ೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಸಲಾಗುವುದು ಎಂದು ಚುನಾವಣಾ ಆಯೋಗ ಘೋಷಿಸಿದೆ. ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಮತದಾರರ ಪಟ್ಟಿಯನ್ನು ಹೆಚ್ಚು ಪಾರದರ್ಶಕ ಮತ್ತು ದೋಷ ಮುಕ್ತವಾಗಿಸುವ ಗುರಿಯನ್ನು ಈ ಪರಿಷ್ಕರಣೆ ಹೊಂದಿದೆ ಎಂದು ಹೇಳಿದರು. ಎರಡನೇ ಹಂತದ ಅಡಿಯಲ್ಲಿ, ಪರಿಷ್ಕರಣೆಯನ್ನು ಹಂತ ಹಂತವಾಗಿ ನಡೆಸಲಾಗುವುದು. ಮೊದಲ ಹಂತದಲ್ಲಿ ಚುನಾವಣಾ ಆಯೋಗ ಯಾವುದೇ ಅರ್ಜಿಗಳನ್ನು ಸ್ವೀಕರಿಸಿಲ್ಲ ಎಂದರು. ಪರಿಷ್ಕರಣೆ ನಡೆಯುವ ಎಲ್ಲಾ ೧೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿನ ಮತದಾರರ ಪಟ್ಟಿಗಳನ್ನು ಇಂದು ಮಧ್ಯರಾತ್ರಿಯಿಂದ ಸ್ಥಗಿತಗೊಳಿಸಲಾಗುವುದು. ಈ ರಾಜ್ಯಗಳಲ್ಲಿ, ಬೂತ್ ಮಟ್ಟದ ಅಧಿಕಾರಿಗಳು ಅಸ್ತಿತ್ವದಲ್ಲಿರುವ ಮತದಾರರಿಗೆ ವಿಶೇಷ ಅರ್ಜಿಗಳನ್ನು ವಿತರಿಸಲಿದ್ದಾರೆ. ೨೦೦೩ ರ ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಹೊಂದಿರುವ ಮತದಾರರು ಯಾವುದೇ ಹೆಚ್ಚುವರಿ ದಾಖಲೆಗಳನ್ನು ಒದಗಿಸುವ ಅಗತ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಧ್ವನಿ: ಜ್ಞಾನೇಶ್ ಕುಮಾರ್ (೧೬ ಸೆಕೆಂಡ್ಸ್)

************

ಯುವ ಅಧಿಕಾರಿಗಳ ನೇತೃತ್ವದ ಭವಿಷ್ಯಕ್ಕೆ ಸಿದ್ಧವಾಗಿರುವ ಪೊಲೀಸ್ ಪಡೆ ವಿಕಸಿತ ಭಾರತ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿಂದು ಭಾರತೀಯ ಪೊಲೀಸ್ ಸೇವೆ ೭೭ ಆರ್‌ಆರ್ ೨೦೨೪ರ ಬ್ಯಾಚ್‌ನ ಪ್ರಶಿಕ್ಷಣಾರ್ಥಿ ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಗಳು, ಶೀಘ್ರದಲ್ಲೇ ಅಧಿಕಾರದ ಹುದ್ದೆಗಳನ್ನು ಅಲಂಕರಿಸಲಿರುವ ಯುವ ಅಧಿಕಾರಿಗಳು ಅಧಿಕಾರದೊಂದಿಗೆ ಜವಾಬ್ದಾರಿ ಬರುತ್ತದೆ ಎಂಬುದನ್ನು ಮನಸ್ಸಿನಲ್ಲಿಟ್ಟುಕೊಳ್ಳಬೇಕು ಎಂದರು. ಯುವ ಅಧಿಕಾರಿಗಳು ನೈತಿಕತೆಯನ್ನು ಅಳವಡಿಕೊಳ್ಳುವ ಜೊತೆಗೆ ತುರ್ತು ಪರಿಸ್ಥಿತಿಗಳನ್ನು ಎದುರಿಸುವಾಗಲೂ ನ್ಯಾಯಯುತ ಕಾರ್ಯವಿಧಾನಗಳನ್ನು ಅನುಸರಿಸಬೇಕು ಎಂದು ರಾಷ್ಟ್ರಪತಿ ತಿಳಿಸಿದರು. ತಂತ್ರಜ್ಞಾನವು ಪೊಲೀಸ್ ವ್ಯವಸ್ಥೆಯಲ್ಲಿ ಗಣನೀಯ ಬದಲಾವಣೆ ತಂದಿದೆ. ಡಿಜಿಟಲ್ ಬಂಧನ ಇತ್ತೀಚಿನ ದಿನಗಳಲ್ಲಿ ನಾಗರಿಕರಿಗೆ ಅತ್ಯಂತ ಪ್ರಮುಖ

ಬೆದರಿಕೆಗಳಲ್ಲಿ ಒಂದಾಗಿದೆ. ದುರುದ್ದೇಶಗಳಿಗಾಗಿ ತಂತ್ರಜ್ಞಾನಗಳನ್ನು ಬಳಸುವವರಿಗೆ ಪ್ರತಿಯಾಗಿ ಯುವ ಐಪಿಎಸ್ ಅಧಿಕಾರಿಗಳು ಕೃತಕ ಬುದ್ಧಿಮತ್ತೆಯಂತಹ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಅಗತ್ಯವಿದೆ ರಾಷ್ಟ್ರಪತಿ ಸಲಹೆ ನೀಡಿದರು.

************

ದೇಶದ ರಕ್ಷಣಾ ಉತ್ಪಾದನೆಯಲ್ಲಿ ಖಾಸಗಿ ವಲಯದ ಭಾಗವಹಿಸುವಿಕೆ ಹೆಚ್ಚುತ್ತಿದ್ದು, ಭಾರತದ ರಕ್ಷಣಾ ರಫ್ತು ಈಗ ದಾಖಲೆಯ ೨೩ ಸಾವಿರ ೫೦೦ ಕೋಟಿ ರೂಪಾಯಿಗಳನ್ನು ತಲುಪಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು. ನವದೆಹಲಿಯಲ್ಲಿಂದು ನಡೆದ ಭಾರತೀಯ ರಕ್ಷಣಾ ಸಾಮಗ್ರಿ ತಯಾರಕರ ಸಂಘ- ಎಸ್ಐಡಿಎಂ ವಾರ್ಷಿಕ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ಸಚಿವರು, ಕಳೆದ ದಶಕದಲ್ಲಿ ದೇಶೀಯ ರಕ್ಷಣಾ ಉತ್ಪಾದನೆಯು ದಾಖಲೆಯ ೧.೫ ಲಕ್ಷ ಕೋಟಿ ರೂಪಾಯಿಗಳಿಗೂ ಮೀರಿದೆ ಮತ್ತು ಖಾಸಗಿ ವಲಯದಿಂದ ೩೩ ಸಾವಿರ ಕೋಟಿ ರೂಪಾಯಿಗಳಿಗೂ ಹಣದ ಹರಿವಿಗೆ ಸಾಕ್ಷಿಯಾಗಿದೆ ಎಂದರು. ಆಪರೇಷನ್ ಸಿಂಧೂರ್‌ನ ಯಶಸ್ಸನ್ನು ಶ್ಲಾಘಿಸಿದ ಸಚಿವರು, ನಾವೀನ್ಯತೆ, ವಿನ್ಯಾಸ ಮತ್ತು ಉತ್ಪಾದನೆಯ ಕ್ಷೇತ್ರಗಳಲ್ಲಿ ಅವಿರತವಾಗಿ ಶ್ರಮಿಸುತ್ತಿರುವವರ ಕುರಿತು ಶ್ಲಾಘನೆ ವ್ಯಕ್ತಪಡಿಸಿದರು. ಆಪರೇಷನ್ ಸಿಂಧೂರ್ ಸಮಯದಲ್ಲಿ ಆಕಾಶ್ ಕ್ಷಿಪಣಿ ವ್ಯವಸ್ಥೆ, ಬ್ರಹ್ಮೋಸ್, ಆಕಾಶ್‌ತೀರ್ ವಾಯು ರಕ್ಷಣಾ ವ್ಯವಸ್ಥೆ ಮತ್ತು ಇತರ ಹಲವು ರೀತಿಯ ಸ್ಥಳೀಯ ಉಪಕರಣಗಳು ಮತ್ತು ವೇದಿಕೆಗಳು ವಹಿಸಿದ ಪಾತ್ರವನ್ನು ಸಚಿವರು ವಿವರಿಸಿದರು. ದೇಶದ ಸ್ಥಳೀಯ ವ್ಯವಸ್ಥೆಗಳ ಯಶಸ್ಸು ಪ್ರಾದೇಶಿಕ ಮಟ್ಟದಲ್ಲಿ ಮಾತ್ರವಲ್ಲದೆ ಅಂತಾರಾಷ್ಟ್ರೀಯ ಮಟ್ಟದಲ್ಲಿಯೂ ಭಾರತದ ಖ್ಯಾತಿಯನ್ನು ಹೆಚ್ಚಿಸಿದೆ ಎಂದು ಅವರು ಹೇಳಿದರು.

ಧ್ವನಿ: ರಾಜನಾಥ್ ಸಿಂಗ್ (೧೪ ಸೆಕೆಂಡ್ಸ್)

************

ಕೃಷಿ ಶಿಕ್ಷಣದಲ್ಲಿ ಸುಧಾರಣೆ ತರಲು ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡುವಂತೆ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಭಾರತೀಯ ಕೃಷಿ ಸಂಶೋಧನಾ ಮಂಡಳಿ, ಐಸಿಎಆರ್‌ಗೆ ಸೂಚಿಸಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ರಾಷ್ಟ್ರೀಯ ಕೃಷಿ ವಿದ್ಯಾರ್ಥಿಗಳ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ಸಚಿವರು, ಸುಗಮ ಕೃಷಿ ಶಿಕ್ಷಣ ಮತ್ತು ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡುವುದನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪತ್ರಗಳನ್ನು ಕಳುಹಿಸುವುದಾಗಿ ಮತ್ತು ಆಯಾ ಕೃಷಿ ಸಚಿವರೊಂದಿಗೆ ಚರ್ಚಿಸುವುದಾಗಿ ತಿಳಿಸಿದ್ದಾರೆ. ನೂತನ ಶಿಕ್ಷಣ ನೀತಿಗೆ ಅನುಗುಣವಾಗಿ ಗುಣಮಟ್ಟದ ಕೃಷಿ ಶಿಕ್ಷಣವನ್ನು ನೀಡುವ ಮಹತ್ವದ ಕುರಿತು ತಿಳಿಸಿದ ಅವರು, ರೈತರು ಮತ್ತು ಕೃಷಿ ರಾಷ್ಟ್ರವನ್ನು ಪರಿವರ್ತಿಸುವ ಶಕ್ತಿಯನ್ನು ಹೊಂದಿವೆ ಎಂದರು.

************

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನವದೆಹಲಿಯಲ್ಲಿಂದು ರಾಷ್ಟ್ರೀಯ ಬೀಜ ನಿಗಮ- ಎನ್‌ಎಸ್‌ಸಿಯ ಅತ್ಯಾಧುನಿಕ ಬೀಜ ಸಂಸ್ಕರಣಾ ಘಟಕವನ್ನು ಉದ್ಘಾಟಿಸಿದರು. ಇದೇ ವೇಳೆ ಅವರು, ಮಧ್ಯಪ್ರದೇಶದ ಬರೇಲಿ, ಕರ್ನಾಟಕದ ಧಾರವಾಡ, ಹಾಸನ ಮತ್ತು ರಾಯಚೂರಿ ಹಾಗೂ ರಾಜಸ್ಥಾನದ ಸೂರತ್‌ಗಢ ಸೇರಿದಂತೆ ಐದು ಎನ್‌ಎಸ್‌ಸಿ ಬೀಜ ಸಂಸ್ಕರಣಾ ಘಟಕಗಳನ್ನು

ವರ್ಚುವಲ್ ಮೂಲಕ ಉದ್ಘಾಟಿಸಿದರು. ಈ ನಿಟ್ಟಿನಲ್ಲಿ, ಪುಸಾದಲ್ಲಿರುವ ಬೀಜ ಭವನ ಪ್ರತಿ ಗಂಟೆಗೆ ಒಂದು ಟನ್ ಸಂಸ್ಕರಣಾ ಸಾಮರ್ಥ್ಯವನ್ನು ಹೊಂದಿದೆ, ಆದರೆ ಇತರ ಐದು ಘಟಕಗಳು ಗಂಟೆಗೆ ತಲಾ ನಾಲ್ಕು ಟನ್ ಸಂಸ್ಕರಿಸುವ ಸಾಮರ್ಥ್ಯ ಹೊಂದಿವೆ ಎಂದು ಸಚಿವರು ತಿಳಿಸಿದರು. ಇದರ ಜೊತೆಗೆ ಸಚಿವರು, ಬೀಜ ನಿರ್ವಹಣೆ ೨.೦ ವ್ಯವಸ್ಥೆ ಮತ್ತು ಆನ್‌ಲೈನ್ ಬೀಜ ಬುಕಿಂಗ್ ವೇದಿಕೆಗೆ ಚಾಲನೆ ನೀಡಿದರು, ಇದು ರೈತರು ತಮಗೆ ಅವಶ್ಯಕತೆ ಇರುವ ಬೀಜಗಳನ್ನು ಆನ್‌ಲೈನ್‌ನಲ್ಲಿ ಕಾಯ್ದಿರಿಸಲು ಅನುವು ಮಾಡಿಕೊಡುತ್ತದೆ  ಹಾಗೂ ಹೆಚ್ಚಿನ ಪಾರದರ್ಶಕತೆ ಮತ್ತು ಲಭ್ಯತೆಯನ್ನು ಖಚಿತಪಡಿಸುತ್ತದೆ.

************

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ಸೀಶೆಲ್ಸ್ ಗಣರಾಜ್ಯದ ಉಪಾಧ್ಯಕ್ಷರಾಗಿ ಆಯ್ಕೆಯಾದ ಸೆಬಾಸ್ಟಿಯನ್ ಪಿಳ್ಳೈ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿಗಳು, ಹಂಚಿಕೆಯ ಪರಂಪರೆ, ಸಂಸ್ಕೃತಿ ಮತ್ತು ಜನರಿಂದ ಜನರ ಸಂಬಂಧಗಳಲ್ಲಿ ಬೇರೂರಿರುವ ಬಹುಮುಖಿ ಭಾರತ-ಸೀಶೆಲ್ಸ್ ಸಂಬಂಧದ ಮೇಲೆ ತಮ್ಮ ಚರ್ಚೆಯು ಕೇಂದ್ರೀಕರಿಸಿದೆ ಎಂದು ಹೇಳಿದರು.

************

ಛತ್ತೀಸ್‌ಗಢದ ಕಾಂಕೇರ್ ಜಿಲ್ಲೆಯಲ್ಲಿ ೨೧ ಮಾವೋವಾದಿಗಳು ತಮ್ಮ ಶಸ್ತ್ರಾಸ್ತ್ರಗಳೊಂದಿಗೆ ಶರಣಾಗಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ನಿಡಿರುವ ಅವರು, ೨೧ ಮಾವೋವಾದಿಗಳಲ್ಲಿ ೧೩ ಮಂದಿ ಹಿರಿಯ ಕಾರ್ಯಕರ್ತರಾಗಿದ್ದಾರೆ. ೨೦೨೬ರ ಮಾರ್ಚ್ ೩೧ ರೊಳಗೆ ಮಾವೋವಾದವನ್ನು ನಿರ್ಮೂಲನೆ ಮಾಡುವ ತಮ್ಮ ಸಂಕಲ್ಪವನ್ನು ಒತ್ತಿಹೇಳುತ್ತಾ, ಇನ್ನೂ ಬಂದೂಕುಗಳನ್ನು ಹಿಡಿದಿರುವ ಉಳಿದ ಮಾವೋವಾದಿಗಳು ಶೀಘ್ರವಾಗಿ ಶರಣಾಗುವಂತೆ ಸಚಿವರು ಮನವಿ ಮಾಡಿದರು.

************

ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಇಂದು ವಿದ್ಯುನ್ಮಾನ ಘಟಕಗಳ ಉತ್ಪಾದನಾ ಯೋಜನೆ - ಇಸಿಎಂಎಸ್ ಅಡಿಯಲ್ಲಿ ಏಳು ಪ್ರಸ್ತಾವನೆಗಳ ಮೊದಲ ಕಂತನ್ನು ಅನುಮೋದಿಸಿದೆ. ಈ ಎಲ್ಲಾ ಅರ್ಜಿಗಳು, ಒಟ್ಟು ಐದು ಸಾವಿರದ ೫೩೨ ಕೋಟಿ ರೂಪಾಯಿಗಳ ಹೂಡಿಕೆಯನ್ನು ಒಳಗೊಂಡಿದ್ದು, ೪೪ ಸಾವಿರದ ೪೦೬ ಕೋಟಿ ರೂಪಾಯಿಗಳ ಉತ್ಪಾದನೆಯನ್ನು ನಿರೀಕ್ಷಿಸಲಾಗಿದೆ. ಈ ಯೋಜನೆಗಳು ಐದು ಸಾವಿರಕ್ಕೂ ಹೆಚ್ಚು ನೇರ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ.

************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೂಡಿಕೆ ಕಾರ್ಯಕ್ರಮದ ಮೂಲಕ ದೈನಂದಿನ ಸುಲಭ ಆದಾಯದ ಭರವಸೆ ನೀಡುತ್ತಿರುವಂತೆ ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡುತ್ತಿದ್ದ ತಿರುಚಲಾದ ವೀಡಿಯೊವನ್ನು ಕೇಂದ್ರ ಸರ್ಕಾರ ತಳ್ಳಿಹಾಕಿದೆ. ಅದರಲ್ಲಿರುವ ಮಾಹಿತಿ ಮತ್ತು ಹೇಳಿಕೆ ಸಂಪೂರ್ಣವಾಗಿ ನಕಲಿಯಾಗಿದ್ದು, ವೀಡಿಯೊವನ್ನು ಡಿಜಿಟಲ್ ವೇದಿಕೆಗಳ ಮೂಲಕ ಮಾರ್ಪಾಡಿಸಲಾಗಿದೆ ಎಂದು ಪಿಐಬಿಯ ಸತ್ಯ ಪರಿಶೀಲನಾ ಘಟಕ ತಿಳಿಸಿದೆ.

************

ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಮೊಂಥಾ ಚಂಡಮಾರುತ ಬಲಗೊಳ್ಳುತ್ತಿದ್ದು, ನಾಳೆಯ ವೇಳೆಗೆ ತೀವ್ರ ಚಂಡಮಾರುತವಾಗಿ ಪರಿಣಮಿಸುವ ನಿರೀಕ್ಷೆಯಿದೆ. ಮುಂದಿನ ಕೆಲವು ದಿನಗಳಲ್ಲಿ ಆಂಧ್ರಪ್ರದೇಶ, ತಮಿಳುನಾಡು, ಪುದುಚೇರಿ ಮತ್ತು ಒಡಿಶಾದ ಕರಾವಳಿ ಪ್ರದೇಶಗಳಲ್ಲಿ ಬಲವಾದ ಗಾಳಿ ಮತ್ತು ಭಾರೀ ಮಳೆಯಾಗುವ ಸಾಧ್ಯತೆಯಿದೆ. ಈ ಪ್ರದೇಶಗಳಲ್ಲಿನ ಅಧಿಕಾರಿಗಳು ಎರಡು ದಿನಗಳವರೆಗೆ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಿದ್ದಾರೆ. ಆಂಧ್ರಪ್ರದೇಶದಲ್ಲಿ, ಕಾಕಿನಾಡ, ಪೂರ್ವ ಗೋದಾವರಿ, ಕೊನಸೀಮಾ, ಎಲುರು ಮತ್ತು ಪಶ್ಚಿಮ ಗೋದಾವರಿ ಜಿಲ್ಲೆಗಳು ಹಲವಾರು ತುರ್ತು ಕ್ರಮಗಳೊಂದಿಗೆ ಎಚ್ಚರಿಕೆ ವಹಿಸಿವೆ.

************